ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದಿಡುತ್ತೇನೆ.

**ಉಪಾಧ್ಯಕ್ಷರು:** ಮಂಡಿಸಲಾಯಿತು.

ಸಭೆಯ ಮುಂದಿಡಲಾದ ಕಾಗದ ಪತ್ರಗಳು

**ಉಪಾಧ್ಯಕ್ಷರು:** ಇನ್ನು ಸಭೆಯ ಮುಂದಿಡಲಾದ ಕಾಗದ ಪತ್ರಗಳು.

ಶಾಸನ ರಚನೆ

ವಿಧೇಯಕದ ಮಂಡನೆ

ಕರ್ನಾಟಕ ಭೂ ಸುಧಾರಣಾ (ಎರಡನೇ ತಿದ್ದುಪಡಿ) ವಿಧೇಯಕ, 2005 ಮಂಡನೆಗೆ ಅನುಮತಿ ಕೋರಿಕೆ

**ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು):** ಮಾನ್ಯ ಉಪಾಧ್ಯಕ್ಷರೇ, 2005ರ ಕರ್ನಾಟಕ ಭೂ ಸುಧಾರಣಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

**ಉಪಾಧ್ಯಕ್ಷರು:** ಪ್ರಸ್ತಾವ ಏನೆಂದರೆ:–

"2005ರ ಕರ್ನಾಟಕ ಭೂ ಸುಧಾರಣಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

**ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು):** ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಭೂ ಸುಧಾರಣಾ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

**ಉಪ ಸಭಾಧ್ಯಕ್ಷರು:** ವಿಧೇಯಕವನ್ನು ಮಂಡಿಸಲಾಗಿದೆ.

ಕರ್ನಾಟಕ ನ್ಯಾಯವಾದಿಗಳ ಕಲ್ಯಾಣನಿಧಿ(ತಿದ್ದುಪಡಿ) ವಿಧೇಯಕ, 2005 ಪರ್ಯಾಲೋಚನಾ ಪ್ರಸ್ತಾವ

**ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):** ಮಾನ್ಯ ಉಪಾಧ್ಯಕ್ಷರೆ, 2004ರ ಕರ್ನಾಟಕ ನ್ಯಾಯವಾದಿಗಳ ಕಲ್ಯಾಣನಿಧಿ ತಿದ್ದುಪಡಿ ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.